# ಕರ್ನಾಟಕ ಸರ್ಕಾರ

**ವಿಷಯ :** 2018-19ನೇ ಸಾಲಿನಲ್ಲಿ ವಿದ್ಯಾಸಿರಿ ಯೋಜನೆಯಡಿ ಫಲಾನುಭವಿಗಳ ಸಂಖ್ಯೆಯನ್ನು 25,000/- ವಿದ್ಯಾರ್ಥಿಗಳಿಗೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:** 1. 2018-19ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ- **226**.

2. ಸರ್ಕಾರದ ಆದೇಶ ಸಂಖ್ಯೆ:ಎಂಡಬ್ಲ್ಯೂಡಿ 163 ಎಂಡಿಎಸ್ 2016, ದಿನಾಂಕ:21-09-2015.

3. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರ ಏಕಕಡತ ಪ್ರಸ್ತಾವನೆ ಸಂಖ್ಯೆ: ಅಸಂನಿ/ವಿದ್ಯಾಸಿರಿ/ ಸಿಆರ್-11/ 2018-19 ದಿನಾಂಕ:02-04-2018.

*~*~*~*~*~*

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ 2018-19ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದ **ಕಂಡಿಕೆ-226ರಲ್ಲಿ ವಿದ್ಯಾಸಿರಿ ಯೋಜನೆಯಡಿ 2018-19ನೇ ಸಾಲಿನಿಂದ ಫಲಾನುಭವಿಗಳ ಸಂಖ್ಯೆಯನ್ನು 25,000 ವಿದ್ಯಾರ್ಥಿಗಳಿಗೆ ಹೆಚ್ಚಿಸಲಾಗುವುದೆಂದು ಘೋಷಿಸಿರುತ್ತಾರೆ.**

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ಆದೇಶದಲ್ಲಿ ಹಿಂದುಳಿದ ವರ್ಗಗಳ ಇಲಾಖೆಯಲ್ಲಿರುವ **"ವಿದ್ಯಾಸಿರಿ ಯೋಜನೆ"** ಯ ಮಾದರಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ **"ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆ"** ಕಾರ್ಯಕ್ರಮ ಪ್ರಾರಂಭಿಸಲು ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ದೊರಕದೇ ಹಾಗೂ ಮೆರಿಟ್ ಹೊಂದಿರುವ ವಿದ್ಯಾರ್ಥಿಗಳಿಗೆ ಪ್ರತಿ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳಿಗೆ ರೂ. 1,500/- ನಂತರ ಶೈಕ್ಷಣಿಕ ಅವಧಿಯ 10 ತಿಂಗಳಿಗೆ ಒಟ್ಟು ರೂ. 15,000/-ಗಳನ್ನು ಅವರ ಬ್ಯಾಂಕ್ ಖಾತೆಗಳಿಗೆ ಆನ್‌ಲೈನ್ ಮುಖಾಂತರ ಜಮಾ ಮಾಡಲು ಭೌತಿಕ ಗುರಿ ಅಂದಾಜು 10,000 ವಿದ್ಯಾರ್ಥಿಗಳಿಗೆ ನಿಗದಿಪಡಿಸಿ ಮಂಜೂರಾತಿ ನೀಡಲಾಗಿದೆ.

ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದ ಕಂಡಿಕೆ-226ರಲಿ ಘೋಷಿಸಿರುವಂತೆ ವಿದ್ಯಾಸಿರಿ ಯೋಜನೆಯಡಿ 2018-19ನೇ ಸಾಲಿನಿಂದ ಫಲಾನುಭವಿಗಳ ಸಂಖ್ಯೆಯನ್ನು 25,000 ವಿದ್ಯಾರ್ಥಿಗಳಿಗೆ ಹೆಚ್ಚಿಸುವಂತೆ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ರವರು ಏಕಕಡತ ಪದ್ಧತಿಯನ್ವಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:MWD 273 MDS 2018, ಬೆಂಗಳೂರು, ದಿನಾಂಕ: 05-09-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2018-19ನೇ ಸಾಲಿನಿಂದ ವಿದ್ಯಾಸಿರಿ ಯೋಜನೆಯಡಿ ಫಲಾನುಭವಿಗಳ ಸಂಖ್ಯೆಯನ್ನು 10,000 ದಿಂದ 25,000 ವಿದ್ಯಾರ್ಥಿಗಳಿಗೆ ಹೆಚ್ಚಿಸಲು ಸರ್ಕಾರದ ಅನುಮೋದನೆ ನೀಡಿ ಆದೇಶಿಸಿದೆ.

...2

ಇದಕ್ಕೆ ತಗಲುವ ವೆಚ್ಚವನ್ನು 2018-19ನೇ ಸಾಲಿನ ಲೆಕ್ಕಶೀರ್ಷಿಕೆ:-2225-03-277-2-91ರಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

2018-19ನೇ ಸಾಲಿನಲ್ಲಿ ಈ ಪ್ರಸ್ತಾವನೆಗೆ ಸಂಬಂಧಿಸಿದಂತೆ ಇದು ಮುಂದುವರೆದ ಯೋಜನೆಯಾಗಿರುವುದರಿಂದ, ಪ್ರಸಕ್ತ ಸಾಲಿಗೆ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಕಾರ್ಯಕ್ರಮವನ್ನು ಜಾರಿಗೊಳಿಸುವ ಹಾಗೂ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಚಾಲ್ತಿಯಲ್ಲಿರುವ Delegation of Financial Powers ರನ್ವಯ ಕ್ರಮವಹಿಸುವ ಹಾಗೂ ಮಾರ್ಗಸೂಚಿಯನ್ವಯ ನಿಯಮಾನುಸಾರ ಹಾಗೂ ಪಾರದರ್ಶಕತೆಯನ್ವಯ ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 468 ವೆಚ್ಚ-3/2018 ದಿನಾಂಕ:02-08-2018 ರಲ್ಲಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 49 ಐಎಂಎಂ 2018 ದಿ:26-07-2018ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಅಕ್ರಂ ಭಾಷ)**
**ಸರ್ಕಾರದ ಅಧೀನ ಕಾರ್ಯದರ್ಶಿ**
**ಅಲ್ಪಸಂಖ್ಯಾತರ ಕಲ್ಯಾಣ, ಹಜ್**
**ಮತ್ತು ವಕ್ಫ್ ಇಲಾಖೆ**
5/9/18

ಗೆ,

1. ಪ್ರಧಾನ ಮಹಾಲೇಖಪಾಲರು(ಎ & ಇ), ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು, ಮುಖ್ಯಮಂತ್ರಿಗಳ ಸಚಿವಾಲಯ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ, ಬೆಂಗಳೂರು.
5. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, 20ನೇ ಮಹಡಿ, ವಿ.ವಿ ಗೋಪುರ, ಬೆಂಗಳೂರು.
6. ನಿರ್ದೇಶಕರು, ಯೋಜನಾ ಇಲಾಖೆ (ಪಿ.ಎಂ.ಐ ವಿಭಾಗ), ಬಹುಮಹಡಿ ಕಟ್ಟಡ, ಬೆಂಗಳೂರು.
7. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ವಿ.ವಿ ಗೋಪುರ, ಬೆಂಗಳೂರು.
8. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು (ನಿರ್ದೇಶಕರು ಮುಖಾಂತರ)
9. ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, (ನಿರ್ದೇಶಕರ ಮುಖಾಂತರ)
10. ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
11. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
12. ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
13. ಎಲ್ಲಾ ಜಿಲ್ಲೆಗಳ ಖಜಾನಾಧಿಕಾರಿಗಳು, (ನಿರ್ದೇಶಕರ ಮುಖಾಂತರ)
14. ಎಲ್ಲಾ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ. (ನಿರ್ದೇಶಕರ ಮುಖಾಂತರ)
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.